ಅ) ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು): ಮಾನ್ಯ ಅಧ್ಯಕ್ಷರೇ, 23-7-2002 ರ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳ ಹನ್ನೊಂದನೇ ಪಟ್ಟಿಯಲ್ಲಿನ 190 ಪ್ರಶ್ನೆಗಳ ಪೈಕಿ 146 ಪ್ರಶ್ನೆಗಳಿಗೆ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ಮಂಡಿಸಲಾಗಿದೆ. (ಅನುಬಂಧ I) (ಅನುಬಂಧ II)

2. ಶಾಸನ ರಚನೆ

ವಿಧೇಯಕಗಳನ್ನು ಮಂಡಿಸುವುದು

(i) **ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ (ತಿದ್ದುಪಡಿ) ವಿಧೇಯಕ, 2002.**

ಮಂಡನೆಗೆ ಅನುಮತಿ ಕೋರಿಕೆ.

ಡಾ. ಜಿ. ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು) : ಮಾನ್ಯ ಅಧ್ಯಕ್ಷರೇ, "2002ರ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ."

ಅಧ್ಯಕ್ಷರು: ಪ್ರಸ್ತಾವ ಏನೆಂದರೆ "2002ರ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಡಾ. ಜಿ. ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು) : ಮಾನ್ಯ ಅಧ್ಯಕ್ಷರೇ, "2002 ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ. (ಅನುಬಂಧ II)

(ii) **ಕಾರ್ಖಾನೆಗಳ (ಕರ್ನಾಟಕ ತಿದ್ದುಪಡಿ) ವಿಧೇಯಕ, 2002.**

ಮಂಡನೆಗೆ ಅನುಮತಿ ಕೋರಿಕೆ.

ಶ್ರೀ ಖಮರುಲ್ ಇಸ್ಲಾಂ: (ಕಾರ್ಮಿಕ ಸಚಿವರು) : ಮಾನ್ಯ ಅಧ್ಯಕ್ಷರೇ, "2002ರ ಕಾರ್ಖಾನೆಗಳ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾಪ ಏನೆಂದರೆ "2002ರ ಕಾರ್ಖಾನೆಗಳ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಖಮರುಲ್ ಇಸ್ಲಾಂ: (ಕಾರ್ಮಿಕ ಸಚಿವರು) : ಮಾನ್ಯ ಅಧ್ಯಕ್ಷರೇ, "2002ರ ಕಾರ್ಖಾನೆಗಳ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು :ವಿಧೇಯಕವನ್ನು ಮಂಡಿಸಲಾಗಿದೆ. (ಅನುಬಂಧ (III), (IV) ಮತ್ತು (V))

(iii) **ಕರ್ನಾಟಕ ಪೌರಸಭೆಗಳ (ತಿದ್ದುಪಡಿ) ವಿಧೇಯಕ, 2002.**

ಮಂಡನೆಗೆ ಅನುಮತಿ ಕೋರಿಕೆ.

ಶ್ರೀ ಎಸ್. ಕುಮಾರ್ ಬಂಗಾರಪ್ಪ (ಮಾನ್ಯ ಪೌರಾಡಳಿತ ರಾಜ್ಯ ಸಚಿವರು) : ಮಾನ್ಯ ಅಧ್ಯಕ್ಷರೇ, "2002ನೇ ಸಾಲಿನ ಕರ್ನಾಟಕ ಪೌರಸಭೆಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."